ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
**Bangalore Development Authority**

ಸಂಖ್ಯೆ : ಬೆಂಅಪ್ರಾ/ನಯೋಸ/DLP-11/2420/2024-25
No.
E Office No. 77792

ದಿನಾಂಕ :
Date : 26/12/2024

## ಕಾರ್ಯಾದೇಶ

ವಿಷಯ: ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಕೊತ್ತನೂರು ಗ್ರಾಮದ ಸರ್ವೆ ನಂ.87/2, 87/3 ರ ಪೈಕಿಯ ಒಟ್ಟು ವಿಸ್ತೀರ್ಣ 5ಎ-34ಗುಂ (23668.68 ಚ.ಮೀ) ವಿಸ್ತೀರ್ಣದ ಜಮೀನನ್ನು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ(15) & (17) ರ ಅಡಿಯಲ್ಲಿ ವಸತಿ ಅಭಿವೃದ್ಧಿ ಯೋಜನೆ ನಕ್ಷೆಯನ್ನು ಅರ್ಜಿದಾರರಾದ M/s Sobha Limited ರವರ ಪರವಾಗಿ ಅನುಮೋದಿಸುವ ಬಗ್ಗೆ.

ಉಲ್ಲೇಖ:
1. ಅರ್ಜಿದಾರರ ಅರ್ಜಿ ದಿನಾಂಕ 15.06.2024
2. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯ ಠರಾವು ಸಂಖ್ಯೆ 6.5.2/ 2024, ದಿನಾಂಕ 30.10.2024
3. ಈ ಕಛೇರಿಯ ಪತ್ರ ಸಂಖ್ಯೆ ಬೆಂಅಪ್ರಾ/ನಯೋಸ/DLP-11/2144/ 2024-25, ದಿನಾಂಕ 28.11.2024.
4. ತಹಶೀಲ್ದಾರ್ ರವರಿಗೆ ಬರೆದ ಪತ್ರ ಸಂಖ್ಯೆ ಬೆಂಅಪ್ರಾ/ನಯೋಸ/ DLP-11/2144/ 2024-25, ದಿನಾಂಕ 28.11.2024.
5. ಅರ್ಜಿದಾರರು ಚಲನ್ ನಂ. GN24127036 ರಲ್ಲಿ ರೂ. 42,02,240/- ಶುಲ್ಕ ಪಾವತಿಸಿ ಚಲನ್ ಸಲ್ಲಿಸಿರುವ ದಿನಾಂಕ 05.12.2024.
6. ಮಾನ್ಯ ಆಯುಕ್ತರ ಕಛೇರಿಯ ಜ್ಞಾಪನಾ ಪತ್ರ ಸಂಖ್ಯೆ ಬೆಂಅಪ್ರಾ/ಆ/ ಉಕಾ-1/ಸಿ.ವಿ/24-25 ದಿನಾಂಕ 06.12.2024.

******

ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಕೊತ್ತನೂರು ಗ್ರಾಮದ ಸರ್ವೆ ನಂ.87/2, 87/3 ರ ಪೈಕಿಯ ಒಟ್ಟು ವಿಸ್ತೀರ್ಣ 5ಎ-34ಗುಂ (23668.68 ಚ.ಮೀ) ವಿಸ್ತೀರ್ಣದ ಜಮೀನನ್ನು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ(15) & (17) ರ ಅಡಿಯಲ್ಲಿ ವಸತಿ ಅಭಿವೃದ್ಧಿ ಯೋಜನೆ ನಕ್ಷೆಯನ್ನು ಅನುಮೋದಿಸಿಕೊಡುವಂತೆ ಅರ್ಜಿದಾರರಾದ M/s Sobha Limited ರವರು ಕೋರಿರುತ್ತಾರೆ.

ವಿಷಯವನ್ನು ಉಲ್ಲೇಖ [2] ರಂತೆ ದಿನಾಂಕ 30.10.2024 ರಂದು ನಡೆದ ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯ ವಿಷಯ ಸಂಖ್ಯೆ 6.5.2/2024 ರಲ್ಲಿ ಮಂಡಿಸಿ ಚರ್ಚಿಸಲಾಗಿರುತ್ತದೆ. ಚರ್ಚೆಯ ನಂತರ "ಸಲ್ಲಿಸಿರುವ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯು ಅನುಮೋದಿತ ಮಹಾಯೋಜನೆ RMP-2015 ರ ವಲಯ ನಿಯಮಾವಳಿಗಳಿಗೆ ಅನುಗುಣವಾಗಿರುವುದನ್ನು ಸಭೆಯು ಗಮನಿಸಿತು. ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಕೊತ್ತನೂರು ಗ್ರಾಮದ ಸ.ನಂ.87/2 & 87/3 ರ ಪೈಕಿ 5ಎ-34ಗುಂ ವಿಸ್ತೀರ್ಣದ ಜಮೀನುಗಳಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ (15) & (17) ರ ಅಡಿಯಲ್ಲಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯನ್ನು ಈ ಕೆಳಕಂಡ ಷರತ್ತುಗಳಿಗೊಳಪಡಿಸಿ, ಕರ್ನಾಟಕ ನಗರ ಮತ್ತು

ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ (15) & (17) ರ ಅಡಿಯಲ್ಲಿ ಅನುಮೋದಿಸಲು ತೀರ್ಮಾನಿಸಲಾಯಿತು. ಈ ಕುರಿತು ನಿಯಮಾನುಸಾರ ಮುಂದಿನ ಕ್ರಮವಹಿಸುವ ಅಧಿಕಾರವನ್ನು ಆಯುಕ್ತರು ರವರಿಗೆ ಪ್ರತ್ಯಾಯೋಜಿಸಲು ನಿರ್ಣಯಿಸಲಾಯಿತು."

ವಸತಿ ಅಭಿವೃದ್ಧಿ ಯೋಜನೆ ನಕ್ಷೆ ಅನುಮೋದನೆ ಸಂಬಂಧ ಅರ್ಜಿದಾರರಿಗೆ ವಿವಿಧ ಶುಲ್ಕಗಳ ಬಾಬ್ತು ₹ 42,02,240/- [₹ ನಲವತ್ತೆರಡು ಲಕ್ಷದ ಎರಡು ಸಾವಿರದ ಇನ್ನೂರ ನಲವತ್ತು ಮಾತ್ರ] ಗಳನ್ನು ಪ್ರಾಧಿಕಾರಕ್ಕೆ ಪಾವತಿಸುವಂತೆ ಉಲ್ಲೇಖ [3] ರಲ್ಲಿ ತಿಳಿಸಲಾಗಿತ್ತು. ಉಲ್ಲೇಖ [4] ರ ಪತ್ರದಲ್ಲಿ ಪ್ರಸ್ತಾಪಿತ ಸರ್ವೆ ನಂಬರ್ ಜಮೀನುಗಳ ಕುರಿತು ಯಾವುದೇ ವ್ಯಾಜ್ಯ / ಪ್ರಕರಣ / ತಕರಾರುಗಳು ಇದ್ದಲ್ಲಿ 15 ದಿನಗಳೊಳಗಾಗಿ ಈ ಕಛೇರಿಗೆ ಮಾಹಿತಿ ನೀಡುವಂತೆ ಕೋರುತ್ತಾ, ಇಲ್ಲವಾದಲ್ಲಿ ಯಾವುದೇ ವ್ಯಾಜ್ಯ / ಪ್ರಕರಣ ತಕರಾರುಗಳು ಇರುವುದಿಲ್ಲವೆಂದು ಬಾವಿಸಿ ಮುಂದಿನ ಕ್ರಮವಹಿಸಲಾಗುವುದೆಂದು ತಹಶೀಲ್ದಾರ್, ಬೆಂಗಳೂರು ದಕ್ಷಿಣ ತಾಲ್ಲೂಕು ರವರಿಗೆ ಪತ್ರ ಬರೆಯಲಾಗಿರುತ್ತದೆ.

ಅರ್ಜಿದಾರರು ದಿನಾಂಕ 05.12.2024 ರಂದು ಶುಲ್ಕ ಮೊತ್ತ ₹ 42,02,240/- [₹ ನಲವತ್ತೆರಡು ಲಕ್ಷದ ಎರಡು ಸಾವಿರದ ಇನ್ನೂರ ನಲವತ್ತು ಮಾತ್ರ] ಗಳನ್ನು ಕೆನರಾ ಬ್ಯಾಂಕ್ ಶಾಖೆಯಲ್ಲಿ ಪಾವತಿಸಿ ಚಲನ್ ನಂ. GN24127036 ನ್ನು ಉಲ್ಲೇಖ [5] ರ ಪತ್ರದಲ್ಲಿ ಅಡಕಗೊಳಿಸಿ ಸಲ್ಲಿಸಿರುತ್ತಾರೆ.

ಉಲ್ಲೇಖ [6] ರಲ್ಲಿನ ಮಾನ್ಯ ಆಯುಕ್ತರ ಆದೇಶದಂತೆ ಅಭಿವೃದ್ಧಿ ಯೋಜನಾ ನಕ್ಷೆ ಮತ್ತು ಕಾರ್ಯಾದೇಶದ ಪ್ರತಿಯನ್ನು ಸದರಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿ ಉದ್ಯಾನವನ / ಬಯಲು ಜಾಗ ಹಾಗೂ ರಸ್ತೆ ವಿಸ್ತರಣೆಗಾಗಿ ಕಾಯ್ದಿರಿಸಿರುವ ಜಾಗಗಳನ್ನು ಪ್ರಾಧಿಕಾರಕ್ಕೆ ಪರಿತ್ಯಾಜನಾ ಪತ್ರವನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಪರವಾಗಿ ನೊಂದಾಯಿಸಿಕೊಳ್ಳುವ ಸಲುವಾಗಿ ಕಾರ್ಯಪಾಲಕ ಅಭಿಯಂತರರು ಮತ್ತು ಕಂದಾಯ ಅಧಿಕಾರಿಗಳಿಗೆ ಸೂಚಿಸಿರುತ್ತಾರೆ. ಹಾಗಾಗಿ ಖಾತ ನೊಂದಣಿಯಾದ ನಂತರ ಯೋಜನೆಯಲ್ಲಿನ ಉದ್ಯಾನವನ/ಬಯಲುಜಾಗಗಳನ್ನು ಪ್ರಾಧಿಕಾರಕ್ಕೆ ನೊಂದಾಯಿತ ಪರಿತ್ಯಾಜನಾ ಪತ್ರದ ಮುಖಾಂತರ ಹಸ್ತಾಂತರ ಮಾಡುವುದು.

ಉಲ್ಲೇಖ [4] ರಲ್ಲಿ ತಹಶೀಲ್ದಾರ್ ರವರಿಗೆ ಬರೆದ ಪತ್ರಕ್ಕೆ ಸಂಬಂಧಿಸಿದಂತೆ, ಸದರಿಯವರಿಂದ ನಿಗದಿತ ಅವಧಿಯಲ್ಲಿ ಯಾವುದೇ ಮಾಹಿತಿ / ವರದಿ ಸ್ವೀಕೃತವಾಗಿಲ್ಲದಿರುವುದರಿಂದ ಪ್ರಸ್ತಾವನೆಯಲ್ಲಿನ ಜಮೀನಿನ ಬಗ್ಗೆ ಯಾವುದೇ ವ್ಯಾಜ್ಯ / ಪ್ರಕರಣ ತಕರಾರುಗಳು ಇರುವುದಿಲ್ಲವೆಂದು ಪರಿಗಣಿಸಿ ಪ್ರಸ್ತಾವನೆಯನ್ನು ಮುಂದುವರೆಸಲಾಗಿದೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಕೊತ್ತನೂರು ಗ್ರಾಮದ ಸರ್ವೆ ನಂ.87/2, 87/3 ರ ಪೈಕಿಯ ಒಟ್ಟು ವಿಸ್ತೀರ್ಣ 5ಎ-34ಗುಂ (23668.68 ಚ.ಮೀ) ವಿಸ್ತೀರ್ಣದ ಜಮೀನುಗಳನ್ನು ವಸತಿ ಅಭಿವೃದ್ಧಿ ಯೋಜನಾ ನಕ್ಷೆಗೆ ಈ ಕೆಳಕಂಡ ಷರತ್ತುಗಳಿಗೊಳಪಡಿಸಿ ಅನುಮೋದನೆ ನೀಡಲಾಗಿದೆ.

ವಿಷಯ: ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಕೊತ್ತನೂರು ಗ್ರಾಮದ ಸರ್ವೆ ನಂ.87/2, 87/3 ರ ಪೈಕಿಯ ಒಟ್ಟು ವಿಸ್ತೀರ್ಣ 5ಎ-34ಗುಂ (23668.68 ಚ.ಮೀ) ವಿಸ್ತೀರ್ಣದ ಜಮೀನನ್ನು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ(15) & (17) ರ ಅಡಿಯಲ್ಲಿ ವಸತಿ ಅಭಿವೃದ್ಧಿ ಯೋಜನೆ ನಕ್ಷೆಯನ್ನು ಅರ್ಜಿದಾರರಾದ M/s Sobha Limited ರವರ ಪರವಾಗಿ ಅನುಮೋದಿಸುವ ಬಗ್ಗೆ.

---

| | |
|---|---|
| 1. | ರೇರಾ ಅಧಿನಿಯಮ, 2016 ಹಾಗೂ ಸಂಬಂಧಿತ ನಿಯಮಗಳು, 2017 ರನ್ವಯ ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದಲ್ಲಿ ನೋಂದಣಿ ಮಾಡಿಸುವುದು. |
| 2. | ವಸತಿ ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿನ ಉದ್ಯಾನವನ ಮತ್ತು ಬಯಲು ಜಾಗಗಳು ಹಾಗೂ RMP-2015 ರ ಪ್ರಸ್ತಾಪಿತ ರಸ್ತೆಗಳಿಗಾಗಿ ಕಾಯ್ದಿರಿಸಿರುವ ಪ್ರದೇಶವನ್ನು ನೊಂದಾಯಿತ ಪರಿತ್ಯಾಜನಾ ಪತ್ರದ ಮುಖಾಂತರ ಪ್ರಾಧಿಕಾರಕ್ಕೆ ಪುಕ್ಕಟೆಯಾಗಿ ಹಸ್ತಾಂತರಿಸುವುದು. |
| 3. | ಪ್ರಾಧಿಕಾರವು ಅನುಮೋದಿಸಿರುವ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯಂತೆಯೇ ಅಭಿವೃದ್ಧಿ ಕಾರ್ಯಗಳನ್ನು ಕಾರ್ಯಗತ ಮಾಡುವುದು. ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೆ ಯಾವುದೇ ಬದಲಾವಣೆ ಮಾಡುವಂತಿಲ್ಲ. |
| 4. | ಅಭಿವೃದ್ಧಿದಾರರು ಉದ್ಯಾನವನಕ್ಕಾಗಿ ಕಾಯ್ದಿರಿಸುವ ಪ್ರದೇಶದಲ್ಲಿ ವಿವಿದ ಜಾತಿಯ ಮರಗಿಡಗಳನ್ನು ಬೆಳಸಿ ಅಭಿವೃದ್ಧಿ ಪಡಿಸುವುದು. ಹಾಗೂ ಸದರಿ ಉದ್ದೇಶಕ್ಕಾಗಿ ಕಾಯ್ದಿರಿಸಿ ಉಪಯೋಗಿಸತಕ್ಕದ್ದು ಬೇರೆ ಯಾವುದೇ ಉದ್ದೇಶಗಳಿಗೆ ಬದಲಾಯಿಸಬಾರದು. |
| 5. | ವಿವರವಾದ ಕಟ್ಟಡ ನಕ್ಷೆಗಳನ್ನು ಸಕ್ಷಮ ಪ್ರಾಧಿಕಾರದಿಂದ ಅನುಮೋದಿಸಿಕೊಳ್ಳುವುದು. |
| 6. | ಸದರಿ ಪ್ರದೇಶದ ಒಳಗೆ ಹೋಗಲು ಮತ್ತು ಹೊರಗೆ ಬರಲು ಸಂಚಾರ ವ್ಯವಸ್ತೆಯಲ್ಲಿ ಅಡಚಣೆ ಉಂಟಾಗದಂತೆ ವ್ಯವಸ್ಥೆ ಕಲ್ಪಿಸುವುದು. ವಾಹನ ತಪಾಸಣೆಗೆ ಮತ್ತು ಭದ್ರತಾ ವ್ಯವಸ್ತೆಯನ್ನು ಅಳವಡಿಸಿದಲ್ಲಿ ಸ್ವತ್ತಿನ ಒಳಭಾಗದಲ್ಲಿ ನಿರ್ವಹಿಸುವುದು. |
| 7. | ವಸತಿ ಅಭಿವೃದ್ಧಿ ಯೋಜನೆ ನಕ್ಷೆಯಲ್ಲಿ ಕಾಯ್ದಿರಿಸಿರುವ ಉದ್ಯಾನವನ / ಬಯಲುಜಾಗದ ಪ್ರದೇಶವು ಸೇರಿದಂತೆ ಹಾಗೂ ವಸತಿ ಅಭಿವೃದ್ಧಿ ಯೋಜನಾ ಪ್ರದೇಶದಲ್ಲಿ 240.0 ಚ.ಮೀ FAR ಪ್ರದೇಶಕ್ಕೆ ಒಂದು ಮರದಂತೆ ವಿವಿಧ ಜಾತಿಯ ಗಿಡಮರಗಳನ್ನು ಬೆಳಸಿ ಅಭಿವೃದ್ಧಿಪಡಿಸುವುದು. |
| 8. | ಕಟ್ಟಡ ಕಾಮಗಾರಿ ಪ್ರಾರಂಭವಾದ ನಂತರ ಕಟ್ಟಡ ಸುರಕ್ಷತೆಯ ಬಗ್ಗೆ ಸಂಬಂಧಿಸಿದ ಸಕ್ಷಮ ಪ್ರಾಧಿಕಾರವು ಪರಿಶೀಲಿಸಿಕೊಳ್ಳತಕ್ಕದ್ದು. ಸಿವಿಲ್ ಕಾಮಗಾರಿ ಮತ್ತು ಕಟ್ಟಡ ಕಾಮಾಗಾರಿಗೆ BWSSB ಯಿಂದ ಸಂಸ್ಕರಿಸಿದ ತ್ಯಾಜ್ಯ ನೀರನ್ನು ಪಡೆದು ಉಪಯೋಗಿಸಿಕೊಳ್ಳತಕ್ಕದ್ದು. |
| 9. | ವಸತಿ ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿ ಕಾಯ್ದಿರಿಸಿರುವ ಸಿ.ಎ ಜಾಗವನ್ನು ಯಥಾವತ್ತಾಗಿ ಹಾಲಿ ಸ್ಥಳದಲ್ಲಿ ವಲಯ ನಿಯಮಾವಳಿಗಳ ಅಧ್ಯಾಯ 7.1.2 ರಂತೆ ಅಭಿವೃದ್ಧಿಪಡಿಸತಕ್ಕದ್ದು. |
| 10. | ಅರ್ಜಿದಾರರು ಉದ್ದೇಶಿಸಿರುವ ಜಮೀನಿನಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ / ಅನ್ಯಖಾಸಗಿ ಜಮೀನುಗಳೇನಾದರೂ ಸೇರಿಕೊಂಡಿರುವುದು ತಿಳಿದುಬಂದಲ್ಲಿ ಅಂತಹ ಸಂದರ್ಭದಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಆಯುಕ್ತರು ಅನುಮೋದಿತ ಅಭಿವೃದ್ಧಿ ನಕ್ಷೆಯನ್ನು ಮಾರ್ಪಾಡು ಮಾಡಲು ಅಥವಾ ಹಿಂತೆಗೆದುಕೊಳ್ಳಲು ಅಧಿಕಾರವುಳ್ಳವರಾಗಿರುತ್ತಾರೆ. |

ವಿಷಯ: ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಕೊತ್ತನೂರು ಗ್ರಾಮದ ಸರ್ವೆ ನಂ.87/2, 87/3 ರ ಪೈಕಿಯ ಒಟ್ಟು ವಿಸ್ತೀರ್ಣ 5ಎ-34ಗುಂ (23668.68 ಚ.ಮೀ) ವಿಸ್ತೀರ್ಣದ ಜಮೀನನ್ನು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ(15) & (17) ರ ಅಡಿಯಲ್ಲಿ ವಸತಿ ಅಭಿವೃದ್ಧಿ ಯೋಜನ ನಕ್ಷೆಯನ್ನು ಅರ್ಜಿದಾರರಾದ M/s Sobha Limited ರವರ ಪರವಾಗಿ ಅನುಮೋದಿಸುವ ಬಗ್ಗೆ.

| | |
|---|---|
| 11. | ದಿನಾಂಕ: 16/1/2010 ರಂದು ಸರ್ಕಾರದ ಅಪರ ಮುಖ್ಯಕಾರ್ಯದರ್ಶಿ ನಗರಾಭಿವೃದ್ಧಿ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಜರುಗಿದ ಸಭೆಯ ನಡವಳಿಯಲ್ಲಿ ತೆಗೆದುಕೊಂಡ ನಿರ್ಣಯದಂತೆ ಹಾಗೂ ದಿನಾಂಕ: 07/01/2011 ರಂದು ಜರುಗಿದ ಸಮಿತಿ ಸಭೆಯ ವಿಷಯ ಸಂಖ್ಯೆ:09/2011ರ ತೀರ್ಮಾನದಂತೆ ಅಭಿವೃದ್ಧಿ ನಕ್ಷೆಯಲ್ಲಿ Arrangement of Blocks ಗಳನ್ನು ವಲಯನಿಯಮಾವಳಿಗಳಂತೆ ಪರಿಶೀಲಿಸಲಾಗಿದ್ದು, ಕಟ್ಟಡನಕ್ಷೆಗೆ ಸಂಬಂಧಿಸಿದ ಇತರೆ ವಿವರಗಳನ್ನು ಪರಿಶೀಲಿಸುವುದಿಲ್ಲ. ಇದನ್ನು ಕಟ್ಟಡನಕ್ಷೆ ಅನುಮೋದಿಸುವ ಸಕ್ಷಮ ಪ್ರಾಧಿಕಾರವು ಸದರಿ ಕಟ್ಟಡ ನಿರ್ಮಾಣ ಸಂಬಂಧಿಸಿದಂತೆ ಅವಶ್ಯವಿರುವ ವಿವಿಧ ಇಲಾಖೆಗಳಿಂದ ಅಗತ್ಯ NOC ಗಳನ್ನು ಮತ್ತು ಇನ್ನಿತರೇ ಮಾಹಿತಿಗಳನ್ನು ಅರ್ಜಿದಾರರಿಂದ ಪಡೆದು ನಿಯಮಾನುಸಾರ ಪರಿಶೀಲಿಸಿಕೊಳ್ಳತಕ್ಕದ್ದು. |
| 12. | ವಸತಿ ಅಭಿವೃದ್ಧಿ ಯೋಜನಾ ನಕ್ಷೆ ಅನುಮೋದನೆ ಸಂಬಂಧ ಜಮೀನಿನ ಮಾಲೀಕತ್ವದ ಬಗ್ಗೆ ಅರ್ಜಿದಾರರು ತಪ್ಪು ಮಾಹಿತಿ / ದಾಖಲಾತಿ ನೀಡಿ ಅನುಮೋದನೆ ಪಡೆದಿದ್ದು ದೃಢಪಟ್ಟಲ್ಲಿ ಮತ್ತು ಮಾಲೀಕತ್ವದ ಬಗ್ಗೆ ನ್ಯಾಯಾಲಯದಲ್ಲಿ ತಕರಾರು ಉದ್ಭವವಾದಲ್ಲಿ ಅಭಿವೃದ್ಧಿ ಯೋಜನಾ ನಕ್ಷೆಯ ಅನುಮೋದನೆಯನ್ನು ರದ್ದುಗೊಳಿಸುವ ಅಥವಾ ಹಿಂಪಡೆಯುವ ಅಧಿಕಾರವನ್ನು ಕೆಟಿಸಿಪಿ ಕಾಯ್ದೆ ಕಲಂ 76(O) ರಡಿಯಲ್ಲಿ ಪ್ರಾಧಿಕಾರದ ಆಯುಕ್ತರು ಅಧಿಕಾರ ಹೊಂದಿದ್ದು, ಅದರಂತೆ ಕ್ರಮ ಜರುಗಿಸಲಾಗುವುದು. |
| 13. | ವಸತಿ ಅಭಿವೃದ್ಧಿ ಯೋಜನೆಯಲ್ಲಿನ ವಸತಿ ಘಟಕಗಳಿಂದ ಉತ್ಪತ್ತಿಯಾಗುವ ಘನತ್ಯಾಜ್ಯಗಳ ವಿಂಗಡಣೆ ಮತ್ತು ಶೇಖರಣೆಗಾಗಿ ಸೂಕ್ತ ಸ್ಥಳವನ್ನು ಕಾಯ್ದಿರಿಸತಕ್ಕದ್ದು. |
| 14. | ಪ್ರಸ್ತಾಪಿತ ಜಮೀನನ್ನು ಅಭಿವೃದ್ಧಿಪಡಿಸುವ ಸಂದರ್ಭದಲ್ಲಿ ಅರ್ಜಿದಾರರು ಕಡ್ಡಾಯವಾಗಿ ಮಳೆನೀರು ಮಳೆ ನೀರು ಕೊಯ್ಲಿಗೆ ಸಂಬಂಧಿಸಿದಂತೆ ಪೂರ್ಣ ವಿವರಗಳನ್ನು ನಕ್ಷೆಯಲ್ಲಿ ಗುರುತಿಸಿ ಉದ್ದೇಶಿತ ಒಟ್ಟು ಕ್ಷೇತ್ರದಲ್ಲಿ ಯಾವುದೇ ರೀತಿಯ ಮಳೆ ನೀರು ವ್ಯರ್ಥವಾಗಿ ಹೊರಗೆ ಹೋಗದಂತೆ ಉದ್ದೇಶಿತ ಜಮೀನಿನಲ್ಲಿಯೇ ಭೂಮಿಯ ಒಳಗಡೆ ಇಂಗುವಂತೆ ಮಾಡಲು ವಿನ್ಯಾಸವನ್ನು ಸಿದ್ದಪಡಿಸಿ ಪೂರ್ಣ ವಿವರಗಳನ್ನು ನಕ್ಷೆಯಲ್ಲಿ ಗುರುತಿಸಿ ತೋರಿಸತಕ್ಕದ್ದು. |
| 15. | ಪ್ರಸ್ತಾಪಿತ ಜಮೀನನ್ನು ಅಭಿವೃದ್ಧಿ ಪಡಿಸುವ ಸಂದರ್ಭದಲ್ಲಿ BESCOM ನಿರ್ದೇಶನದಂತೆ ಎಲೆಕ್ಟ್ರಿಕ್ ಕೇಬಲ್ ಗಳನ್ನು ಅಳವಡಿಸತಕ್ಕದ್ದು. |
| 16. | ನಾಲಾ ಬಫರ್ ಗಾಗಿ ಕಾಯ್ದಿರಿಸಿರುವ ಪ್ರದೇಶವನ್ನು ಸ್ಥಳೀಯ ಸಂಸ್ಥೆ ಅಥವಾ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಇತರೆ ಸರ್ಕಾರಿ ಅಥವಾ ಸರ್ಕಾರೇತರ ಸಂಸ್ಥೆಗಳಿಂದ Storm Water Drain ಅಥವಾ ಒಳಚರಂಡಿ ವ್ಯವಸ್ಥೆಗಳು ಹಾಗೂ ರಸ್ತೆಯನ್ನು ಅಭಿವೃದ್ಧಿಪಡಿಸುವ ಸಂದರ್ಭದಲ್ಲಿ ಮುಫತ್ತಾಗಿ ಸಾರ್ವಜನಿಕ ಉಪಯೋಗಕ್ಕಾಗಿ ನೊಂದಾಯಿತ ಪರಿತ್ಯಜನಾ ಪತ್ರದ ಮೂಲಕ ಪ್ರಾಧಿಕಾರಕ್ಕೆ ಹಸ್ತಾಂತರಿಸತಕ್ಕದ್ದು. |

| | |
|---|---|
| 17. | ರೆವಿನ್ಯೂ ದಾಖಲೆಗಳ / ಜಮೀನಿನ ಮಾಲೀಕತ್ವದ ದಾಖಲೆಗಳ ಸಂಬಂಧ ಯಾವುದೇ ನ್ಯಾಯಾಲಯದಲ್ಲಿ ಲೋಕಾಯುಕ್ತದಲ್ಲಾಗಲೀ ಯಾವುದೇ ಪ್ರಕರಣ ಇರುವುದಿಲ್ಲವೆಂದು ಸಲ್ಲಿಸಿರುವ ನೋಟರೈಸ್ಡ್ ಪ್ರಮಾಣ ಪತ್ರಕ್ಕೆ ಬದ್ಧರಾಗಿರತಕ್ಕದ್ದು. ಪ್ರಾಧಿಕಾರವು ಈ ಬಗ್ಗೆ ಜವಾಬ್ದಾರಿಯಾಗುವುದಿಲ್ಲ. |
| 18. | ವಸತಿ ಯೋಜನೆಯಲ್ಲಿನ ವಸತಿ ಘಟಕಗಳಿಗೆ ಕುಡಿಯುವ ನೀರಿಗಾಗಿ ಮತ್ತು ಇತರೆ ಉಪಯೋಗದ ನೀರಿಗಾಗಿ ಪ್ರತ್ಯೇಕವಾದ ಕೊಳಾಯಿ ವ್ಯವಸ್ಥೆಯನ್ನು (Duel piping System) ಮಾಡತಕ್ಕದ್ದು. ವಸತಿ ಘಟಕಗಳಿಂದ ಬರುವ ಕೊಳಚೆ ನೀರನ್ನು ಸಂಸ್ಕರಣೆ ಮಾಡಲು ಯೋಜನೆಯಲ್ಲಿ ಸಂಸ್ಕರಣಾ ಘಟಕ ಸ್ಥಾಪಿಸಿ, ಸಂಸ್ಕರಿಸಿದ ನೀರನ್ನು ಇತರೆ ಉಪಯೋಗಗಳಿಗಾಗಿ ಉಪಯೋಗಿಸತಕ್ಕದ್ದು ಮತ್ತು ಒಳಚರಂಡಿ ವ್ಯವಸ್ಥೆಯನ್ನು ಅರ್ಜಿದಾರರೇ ಕಲ್ಪಿಸುವುದು. |
| 19. | BWSSB,BESCOM, KSPCB, ವಾಯುಯಾನ ಪ್ರಾಧಿಕಾರ, ಅಗ್ನಿಶಾಮಕ ಇಲಾಖೆ ಗಳಿಂದ NOC ಪಡೆದು ಕಟ್ಟಡ ನಕ್ಷೆ ಅನುಮೋದನೆ ಮೊದಲು ಸಕ್ಷಮ ಪ್ರಾಧಿಕಾರಕ್ಕೆ ಸಲ್ಲಿಸಬೇಕಿರುತ್ತದೆ. ಅನುಮತಿ ನೀಡುವ ಸಕ್ಷಮ ಪ್ರಾಧಿಕಾರವು ಅದನ್ನು ಪರಿಸೀಲಿಸಿಕೊಳ್ಳತಕ್ಕದ್ದು. |
| 20. | ಪ್ರಶ್ನಿತ ಪ್ರದೇಶದಲ್ಲಿ ಹಾದು ಹೋಗುವ ಹಳ್ಳ ಕೊಳ್ಳಗಳ ನೀರಿನ ಹರಿವಿಗೆ ಅಡಚಣೆ ಉಂಟು ಮಾಡದೆ ಸರಾಗವಾಗಿ ಹಾದು ಹೋಗುವಂತೆ ಅಭಿವೃದ್ಧಿ ಪಡಿಸುವುದು. |
| 21. | ಸ್ವಾಭಾವಿಕವಾಗಿ ಇಳಿಮಟ್ಟದ ಕಡೆ ಹೋಗುವ ಮಳೆನೀರನ್ನು ಡ್ರೈನ್ ಮುಖಾಂತರ ವ್ಯಾಲಿಗೆ ತಂದು ಸೇರಿಸುವುದು ಹಾಗೂ ನೀರು ಸರಾಗವಾಗಿ ಹರಿಯಲು ಸೂಕ್ತ ವ್ಯವಸ್ಥೆ ಮಾಡುವುದು. |
| 22. | ಕಟ್ಟಡ ನಕ್ಷೆ ಅನುಮೋದನೆ ಸಮಯದಲ್ಲಿ ತಳಮಹಡಿ ಅಗತ್ಯತೆ ಬಗ್ಗೆ Water table ನ ವರದಿ ಪಡೆದು ಅದಕ್ಕನುಗುಣವಾಗಿ ಕ್ರಮ ಜರುಗಿಸುವುದು. |
| 23. | ಬಫರ್ ಪ್ರದೇಶದಲ್ಲಿ ಗಿಡಮರಗಳನ್ನು ಬೆಳಸತಕ್ಕದ್ದು. |
| 24. | ಪ್ರಶ್ನಿತ ಪ್ರದೇಶದಲ್ಲಿ ಉದ್ದೇಶಿತ ಕಟ್ಟಡದ ಒಟ್ಟು ಫ್ಲೋರ್ ವಿಸ್ತೀರ್ಣದ ಪ್ರತಿ 240.0ಚ.ಮೀಗೆ ಒಂದು ಮರದಂತೆ ಗಿಡ / ಮರಗಳನ್ನು ನೆಟ್ಟು ಪೋಷಿಸತಕ್ಕದ್ದು. |
| 25. | ಪ್ರಾಧಿಕಾರವು ವಿಧಿಸುವ ಇತರೆ ಷರತ್ತುಗಳಿಗೆ ಬದ್ಧರಾಗಿರುವುದು. |

ವಿಷಯ: ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಕೊತ್ತನೂರು ಗ್ರಾಮದ ಸರ್ವೆ ನಂ.87/2, 87/3 ರ ಪೈಕಿಯ ಒಟ್ಟು ವಿಸ್ತೀರ್ಣ 5ಎ-34ಗುಂ (23668.68 ಚ.ಮೀ) ವಿಸ್ತೀರ್ಣದ ಜಮೀನನ್ನು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ(15) & (17) ರ ಅಡಿಯಲ್ಲಿ ವಸತಿ ಅಭಿವೃದ್ಧಿ ಯೋಜನೆ ನಕ್ಷೆಯನ್ನು ಅರ್ಜಿದಾರರಾದ M/s Sobha Limited ರವರ ಪರವಾಗಿ ಅನುಮೋದಿಸುವ ಬಗ್ಗೆ.

---

ಮೇಲ್ಕಂಡ ಷರತ್ತುಗಳೊಂದಿಗೆ, ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಕೊತ್ತನೂರು ಗ್ರಾಮದ ಸರ್ವೆ ನಂ.87/2, 87/3 ರ ಪೈಕಿಯ ಒಟ್ಟು ವಿಸ್ತೀರ್ಣ 5ಎ-34ಗುಂ (23668.68 ಚ.ಮೀ) ವಿಸ್ತೀರ್ಣದ ಜಮೀನನ್ನು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ (15) & (17) ರ ಅಡಿಯಲ್ಲಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆಗೆ ಅನುಮೋದನೆ ನೀಡಲಾಗಿದೆ.

ಅಡಕ: ಅಭಿವೃದ್ಧಿ ಯೋಜನಾ ನಕ್ಷೆ

ಆಯುಕ್ತರು,
ಬೆಂಅಪ್ರಾ, ಬೆಂಗಳೂರು

ಇವರಿಗೆ,

M/s. Sobha Limited
Sarjapura Marathahalli Outer Ring Road,
Devarabeesanahalli ,
Bellandur Post,
Bangalore-560103

Housiey.com